# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(5)ಪಿಆರ್/ 62 /23-24

ಆಯುಕ್ತರವರ ಕಛೇರಿ
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 30-10-23

**<u>ಸುತ್ತೋಲೆ</u>**

ವಿಷಯ: ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿಕಾರಿ / ಸಿಬ್ಬಂದಿಗಳು ಶಿಸ್ತು ಪಾಲಿಸುವ ಬಗ್ಗೆ.

---------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕೇಂದ್ರ ಕಛೇರಿ ಮತ್ತು ವಲಯ ಕಛೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಅಧಿಕಾರಿ / ಸಿಬ್ಬಂದಿಗಳು ಕಛೇರಿ ಕೆಲಸಕ್ಕೆ ನಿಗಧಿತ ಸಮಯಕ್ಕೆ ಹಾಜರಾಗಿ ಗುರುತಿನ ಚೀಟಿ ಧರಿಸಿಕೊಂಡು ಕರ್ತವ್ಯ ನಿರ್ವಹಿಸಬೇಕಾಗಿರುತ್ತದೆ. ಆದರೆ, ಕೆಲವೊಂದು ಕಛೇರಿಗಳಲ್ಲಿ ಅಧಿಕಾರಿ / ಸಿಬ್ಬಂದಿಗಳು ನಿಗಧಿತ ಸಮಯದಲ್ಲಿ ಕಛೇರಿಯಲ್ಲಿ ಹಾಜರಿಲ್ಲದೆ ಇರುವುದು ಮತ್ತು ಗುರುತಿನ ಚೀಟಿಯನ್ನು ಧರಿಸದೆ ಇರುವುದನ್ನು ಗಮನಿಸಲಾಗಿರುತ್ತದೆ. ಆದ್ದರಿಂದ ಇನ್ನು ಮುಂದೆ ಕಡ್ಡಾಯವಾಗಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಅಧಿಕಾರಿ / ಸಿಬ್ಬಂದಿಗಳು ಈ ಕೆಳಕಂಡಂತೆ ಶಿಸ್ತು ಪಾಲಿಸಲು ಆದೇಶಿಸಿದೆ.

1. ಪಾಲಿಕೆಯ ಎಲ್ಲಾ ಅಧಿಕಾರಿ / ಸಿಬ್ಬಂದಿಗಳು ನಿಗಧಿತ ಸಮಯಕ್ಕೆ ಸರಿಯಾಗಿ ಕರ್ತವ್ಯಕ್ಕೆ ಹಾಜರಾಗುವುದು ಮತ್ತು ಕಛೇರಿಯ ಅವಧಿ ಮುಕ್ತಾಯಗೊಳ್ಳುವವರೆಗೂ ಕಛೇರಿಯಲ್ಲಿ ಹಾಜರಿರುವುದು.
2. ಕಛೇರಿ ಅವಧಿಯಲ್ಲಿ ಪಾಲಿಕೆಯ ಎಲ್ಲಾ ಅಧಿಕಾರಿ / ಸಿಬ್ಬಂದಿಗಳು ಕಡ್ಡಾಯವಾಗಿ ಗುರುತಿನ ಚೀಟಿಯನ್ನು ಧರಿಸುವುದು.
3. ಸಮವಸ್ತ್ರ ಭತ್ಯೆ ಪಡೆಯುವ ಎಲ್ಲಾ ನೌಕರರುಗಳು ತಪ್ಪದೆ ಸಮವಸ್ತ್ರವನ್ನು ಧರಿಸುವುದು.
4. ಕಛೇರಿಯಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿ / ಸಿಬ್ಬಂದಿಗಳು ತಾವು ಕುಳಿತುಕೊಳ್ಳುವ ಸ್ಥಳದಲ್ಲಿ ಸಾರ್ವಜನಿಕರಿಗೆ ಕಾಣಿಸುವ ರೀತಿಯಲ್ಲಿ ತಮ್ಮ ಹೆಸರು ಮತ್ತು ಹುದ್ದೆಯನ್ನು ಪ್ರದರ್ಶಿಸುವುದು.
5. ಕಛೇರಿ ಮುಖ್ಯಸ್ಥರು ತಮ್ಮ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಹೆಸರು ಮತ್ತು ಇವರು ಕಛೇರಿಯಲ್ಲಿ ನಿರ್ವಹಿಸುತ್ತಿರುವ ಕೆಲಸಗಳ ವಿವರಗಳನ್ನು ಕಛೇರಿಯ ಮುಂಭಾಗದಲ್ಲಿ ಸಾರ್ವಜನಿಕರಿಗೆ ಕಾಣಿಸುವ ರೀತಿಯಲ್ಲಿ ಪ್ರದರ್ಶಿಸುವುದು.
6. ಪಾಲಿಕೆಯ ಎಲ್ಲಾ ಕಛೇರಿಗಳು ಮತ್ತು ಆವರಣಗಳು ಶುಚಿತ್ವದಿಂದ ಕೂಡಿರುವ ಬಗ್ಗೆ ಸಂಬಂಧಪಟ್ಟ ವಿಭಾಗದವರು ಕ್ರಮ ಕೈಗೊಳ್ಳುವುದು.

ಮೇಲ್ಕಂಡ ಆದೇಶದಂತೆ ಪಾಲಿಕೆಯ ಎಲ್ಲಾ ಬಟವಾಡೆ ಅಧಿಕಾರಿಗಳು / ಇಲಾಖಾ ಮುಖ್ಯಸ್ಥರು / ವಲಯ ಆಯುಕ್ತರು ರವರುಗಳು ಅಗತ್ಯ ಕ್ರಮ ಕೈಗೊಳ್ಳುವುದು.

ಮುಂದುವರೆದಂತೆ ಪಾಲಿಕೆಯ ಎಲ್ಲಾ ಅಧಿಕಾರಿ / ಸಿಬ್ಬಂದಿಗಳು ಮೇಲ್ಕಂಡ ಆದೇಶದಂತೆ ಶಿಸ್ತು ಪಾಲಿಸುತ್ತಿರುವ ಬಗ್ಗೆ ಪರಿಶೀಲಿಸಲು **ವಿಶೇಷ ಆಯುಕ್ತರು (ಕಲ್ಯಾಣ)** ರವರನ್ನು ನೋಡಲ್ ಅಧಿಕಾರಿಯನ್ನಾಗಿ ನೇಮಿಸಿ ಆದೇಶಿಸಿದೆ. ಸದರಿ ಅಧಿಕಾರಿಯವರು ಪಾಲಿಕೆಯ ವಿವಿಧ ಕಛೇರಿಗಳಿಗೆ ಅನಿರೀಕ್ಷಿತ ಭೇಟಿ ನೀಡಿ ತಪಾಸಣೆ ನಡೆಸಿ, ಯಾರಾದರೂ ಶಿಸ್ತನ್ನು ಪಾಲಿಸದೆ ಬೇಜವಾಬ್ದಾರಿತನ / ನಿರ್ಲಕ್ಷತೆ ತೋರಿರುವುದು ಕಂಡುಬಂದಲ್ಲಿ ಅಂತಹವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ತಪಾಸಣಾ ವರದಿಯೊಂದಿಗೆ ಇಲಾಖಾ ಮುಖ್ಯಸ್ಥರಿಗೆ ಪ್ರಸ್ತಾವನೆ ಸಲ್ಲಿಸಲು ಸೂಚಿಸಿದೆ.

30.10.23
ಮುಖ್ಯ ಆಯುಕ್ತರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

20/10/23 20.10.23 20/10/23

: ಮಾನ್ಯ ಆಡಳಿತಗಾರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ಮುಖ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ವಿಶೇಷ ಆಯುಕ್ತರು (ಆಡಳಿತ) / (ಯೋಜನೆ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
: ಎಲ್ಲಾ ವಲಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
: ವಿಶೇಷ ಆಯುಕ್ತರು (ಕಲ್ಯಾಣ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
: ಎಲ್ಲಾ ವಲಯ ಅಪರ / ಜಂಟಿ ಆಯುಕ್ತರು ರವರುಗಳಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
: ಎಲ್ಲಾ ವಲಯ ಬಟವಾಡೆ ಅಧಿಕಾರಿಗಳಿಗೆ ಮಾಹಿತಿಗಾಗಿ ಕಳುಹಿಸಿದೆ.
: ಎಲ್ಲಾ ವಲಯ ಇಲಾಖಾ ಮುಖ್ಯಸ್ಥರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
: ಮಾಹಿತಿ ತಂತ್ರಜ್ಞಾನ ಸಲಹೆಗಾರರು ರವರಿಗೆ ಕಳುಹಿಸುತ್ತಾ, ಸದರಿ ಸುತ್ತೋಲೆ ಪ್ರತಿಯನ್ನು ಪಾಲಿಕೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಿದೆ.
: ಕಛೇರಿ ಪ್ರತಿ.